ಕರ್ನಾಟಕ ಸರ್ಕಾರ

ಸಂಖ್ಯೆ: ಆಕುಕ 71 ಹೆಚ್‌ಎಸ್ ಹೆಚ್ 2019

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ
ಬೆಂಗಳೂರು, ದಿನಾಂಕ: 10.06.2021

## ಸುತ್ತೋಲೆ

**ವಿಷಯ:** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ನೇರ ನೇಮಕಾತಿ ಮೂಲಕ ನೇಮಕಗೊಂಡ ತಜ್ಞ ವೈದ್ಯರುಗಳು ಹುದ್ದೆಗೆ ಸೇರುವ ಕಾಲವನ್ನು ವಿಸ್ತರಿಸುವ ಬಗ್ಗೆ.

********

ಸರ್ಕಾರದ ಅಧಿಸೂಚನೆ ಸಂಖ್ಯೆ:ಆಕುಕ 71 ಹೆಚ್ ಎಸ್ ಹೆಚ್ 2021, ದಿನಾಂಕ: 28.05.2021ರಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇದ್ದ ತಜ್ಞ ವೈದ್ಯರುಗಳ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಆಯ್ಕೆ ಮಾಡಿ ಸ್ಥಳ ನಿಯುಕ್ತಿಗೊಳಿಸಿ ಆದೇಶ ಹೊರಡಿಸಲಾಗಿದೆ. ಸದರಿ ತಜ್ಞ ವೈದ್ಯರುಗಳಿಗೆ ಹುದ್ದೆಗೆ ಸೇರುವ ಕಾಲವನ್ನು 15 ದಿನಗಳವರೆಗೆ ನೀಡಲಾಗಿದ್ದು, ಸದರಿ ಅವಧಿಯು ದಿನಾಂಕ:11.06.2021ರಂದು ಮುಕ್ತಾಯಗೊಳ್ಳಲಿದೆ.

ಪ್ರಸ್ತುತ ರಾಜ್ಯದಲ್ಲಿ ಕೋವಿಡ್-19ನ ತೀವ್ರತೆ ಕಾರಣ ಸಂಪೂರ್ಣ ಲಾಕ್‌ಡೌನ್ ಜಾರಿಯಲ್ಲಿದ್ದ ಕಾರಣ, ಎಲ್ಲಾ ರೀತಿಯ ಸಾರಿಗೆ ಸಂಚಾರವನ್ನು ನಿರ್ಬಂಧಿಸಲಾಗಿದೆ. ಆದ್ದರಿಂದ ಹುದ್ದೆಗೆ ಸೇರುವ ಕಾಲವನ್ನು ವಿಸ್ತರಿಸುವಂತೆ ಹಲವಾರು ವೈದ್ಯಾಧಿಕಾರಿಗಳಿಂದ ಮನವಿಗಳು ಬಂದ ಹಿನ್ನೆಲೆಯಲ್ಲಿ 'ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೌಕರಿ ಭರ್ತಿ) ನಿಯಮಗಳು, 1977'ರ ನಿಯಮ 18(2)ರನ್ವಯ **ತಜ್ಞ ವೈದ್ಯರುಗಳು ಹುದ್ದೆಗೆ ಸೇರುವ ಕಾಲವನ್ನು ದಿನಾಂಕ:16.06.2021ರ ವರೆಗೆ ವಿಸ್ತರಿಸಲಾಗಿದೆ.**

ಎಲ್ಲಾ ತಜ್ಞ ವೈದ್ಯಾಧಿಕಾರಿಗಳು ವಿಸ್ತರಿತ ಕಾಲಾವಧಿಯೊಳಗೆ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವುದು. ಉಳಿದಂತೆ ಅಧಿಸೂಚನೆ ಸಂಖ್ಯೆ:ಆಕುಕ 71 ಹೆಚ್ ಎಸ್ ಹೆಚ್ 2021, ದಿನಾಂಕ:28.05.2021ರಲ್ಲಿನ ಎಲ್ಲಾ ಷರತ್ತುಗಳು ಯಥಾವತ್ತಾಗಿ ಮುಂದುವರೆಯುತ್ತವೆ.

(ಜಾವೇದ್ ಅಖ್ತರ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

**ಇವರಿಗೆ:**

1. ಮಹಾಲೇಖಪಾಲರು (ಲೆಕ್ಕಪತ್ರ/ಲೆಕ್ಕಪರಿಶೋಧನೆ), ಬೆಂಗಳೂರು.
2. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
3. ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.
4. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು
5. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
6. ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು/ಜಿಲ್ಲಾ ಶಸ್ತ್ರಚಿಕಿತ್ಸಕರು/ವೈದ್ಯಕೀಯ ಅಧೀಕ್ಷಕರು.
7. ರಿಜಿಸ್ಟ್ರಾರ್, ಕರ್ನಾಟಕ ವೈದ್ಯಕೀಯ ಪರಿಷತ್ತು (KMC), ಕೆ.ಆರ್ ರಸ್ತೆ, ಬೆಂಗಳೂರು.
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.